ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಬೆಸ್ಕಾಂ ವತಿಯಿಂದ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ

ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

355(446) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಸ್ಕಾಂ ವತಿಯಿಂದ ಕಳೆದ 3 ವರ್ಷಗಳಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳಿಗಾಗಿ ಬಿಡುಗಡೆಯಾದ ಅನುದಾನವೆಷ್ಟು; ಈ ಕಾಮಗಾರಿಗಳ ಟೆಂಡರ್ ಮೊತ್ತವೆಷ್ಟು; ಈ ಕಾಮಗಾರಿಗಳನ್ನು ಪಡೆದಿರುವ ಗುತ್ತಿಗೆದಾರರ ವಿವರಗಳೇನು; (ಆದೇಶ ಸಹಿತ ಕಾಮಗಾರಿವಾರು ವಿವರ ನೀಡುವುದು)

(ಆ) ಈ ಕಾಮಗಾರಿಗಳ ಟೆಂಡರ್ ಅನ್ನು ಕೆಲವೇ ಗುತ್ತಿಗೆದಾರರಿಗೆ ಅನುಕೂಲವಾಗುವಂತೆ ಮಾಡಲಾಗಿದ್ದು, under ground cable ಅಳವಡಿಸುವ ಕಾಮಗಾರಿಗಳಲ್ಲಿ ಭಾರಿ ಅವ್ಯವಹಾರಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸಂಬಂಧಪಟ್ಟವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ? (ಪ್ರಕರಣವಾರು ಮಾಹಿತಿ ನೀಡುವುದು